ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ. ಯವರ ನ್ಯಾಯಾಲಯ, ಕುಂದಾಪುರ

ಸಿ.ಸಿ. ನಂಬ್ರ:1783/2013

ಚಾಸಾ:20 ಪ್ರಾಸಾ:12

ದಿನಾಂಕ: 11.03.2025

| | | |
|---|---|---|
| ವಾಗ್ಮೂಲದವರ ಹೆಸರು | : | ಶ್ರೀ ಸುಧಾಕರ ಖಾರ್ವಿ |
| ತಂದೆಯ ಹೆಸರು | : | ಭಾಸ್ಕರ ಖಾರ್ವಿ |
| ವಯಸ್ಸು | : | 48 ವರ್ಷ |
| ಉದ್ಯೋಗ | : | ವ್ಯವಹಾರ |
| ವಾಸ ಸ್ಥಳ | : | ಕುಂದಾಪುರ |

ಸಾಕ್ಷಿಯನ್ನು ಪ್ರಮಾಣೀಕರಿಸಲಾಯಿತು.

**<u>ಮುಖ್ಯ ವಿಚಾರಣೆ: ಮಾನ್ಯ ಸ.ಸ.ಅ.ರವರಿಂದ:</u>**

ಸಾಕ್ಷಿಗೆ ದಿ: 11-01-2013ರ ಆರೋಪಿ ದಸ್ತಗಿರಿ ಮತ್ತು ಸ್ವತ್ತು ಸ್ವಾಧೀನತಾ ಮಹಜರನ್ನು ತೋರಿಸಲಾಗಿ, ಅದರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ ಮೇರೆಗೆ ಅದನ್ನು ನಿಪಿ-12 ಎಂದು, ಸಾಕ್ಷಿ ಸಹಿಯನ್ನು ನಿಪಿ-12(ಎ) ಎಂದು ಗುರುತಿಸಲಾಯಿತು. ಸಾಕ್ಷಿ ನಿಪಿ-8 ರಲ್ಲಿ ತನ್ನ ಸಹಿಯನ್ನು ನೋಡಿ ಗುರುತಿಸಿದ ಮೇರೆಗೆ ಅದನ್ನು ನಿಪಿ-8(ಬಿ) ಎಂದು ಗುರುತಿಸಲಾಯಿತು. ನಿಪಿ-7 ರಲ್ಲಿ ಕಂಡು ಬರುವ ಆಭರಣಗಳನ್ನು ನೋಡಿ ಸಾಕ್ಷಿ ಗುರುತಿಸಿಲ್ಲ. ಸದ್ರಿ ಸಹಿಗಳನ್ನು ಪೊಲೀಸ್ ಠಾಣೆಯಲ್ಲಿ ಮಾಡಿರುತ್ತೇನೆ. ಅದರಲ್ಲಿ ಏನು ಬರೆದಿದೆ ಎಂದು ಗೊತ್ತಿಲ್ಲ. ನನ್ನ ಸಮಕ್ಷಮದಲ್ಲಿ ಯಾವುದೇ ಸ್ವತ್ತನ್ನು ವಶಪಡಿಸಿಕೊಂಡಿಲ್ಲ.

**(ಈ ಹಂತದಲ್ಲಿ ಸಾಕ್ಷಿಯು ಅಭಿಯೋಜನೆಗೆ ವಿರುದ್ದವಾಗಿ ಸಾಕ್ಷಿ ನುಡಿದಿದ್ದರಿಂದ ಮಾನ್ಯ ಸ.ಸ.ಅ.ರವರು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ವಾಟೀ ಸವಾಲಿಗೆ ಅನುಮತಿ ಕೋರಿದ್ದು ಅನುಮತಿ ನೀಡಲಾಯಿತು.)**

**<u>ವಾಟೀ ಸವಾಲು: ಮಾನ್ಯ ಸ.ಸ.ಅ.ರವರಿಂದ:</u>**

ದಿಃ09-01-2013 ರಂದು ಪೊಲೀಸರು 2ನೇ ಆರೋಪಿಯನ್ನು ವಶಕ್ಕೆ ಪಡೆದು ಪಂಚನಾಮೆಯನ್ನು ಸಂಜೆ 6-15 ಕ್ಕೆ ಜರುಗಿಸಿ ನಿಪಿ-8ಕ್ಕೆ ನನ್ನ ಸಹಿ ಪಡೆದಿರುತ್ತಾರೆ ಎಂದರೆ ಸರಿಯಲ್ಲ.

ದಿಃ 11-03-2013 ರಂದು 1ನೇ ಆರೋಪಿತರನ್ನು ವಶಕ್ಕೆ ಪಡೆದು ಆತನಿಂದ ನಿಪಿ-7 ರಲ್ಲ ಕಾಣುವ ಚಿನ್ನಾಭರಣವನ್ನು ವಶಕ್ಕೆ ಪಡೆದು ನಿಪಿ-12 ರ ಪಂಚನಾಮೆಯನ್ನು ಜರುಗಿಸಿ ಮಧ್ಯ ರಾತ್ರಿ 1 ರಿಂದ 2 ಗಂಟೆಯವರೆಗೂ ಕ್ರಮವನ್ನು ಜರುಗಿಸಿ ನಿಪಿ-12 ಕ್ಕೆ ನನ್ನ ಸಹಿ ಪಡೆದಿರುತ್ತಾರೆ ಎಂದರೆ ಸರಿಯಲ್ಲ. ಮೇಲೆ ಹೇಳಿದ ಕ್ರಮವನ್ನು ನನ್ನ ಸಮಕ್ಷಮ ಜರುಗಿಸಿದ್ದರೂ ಆರೋಪಿತರು ನನ್ನ ಪರಿಚಯಸ್ಥರಾದ ಕಾರಣ ಅವರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆಂದರೆ ಸರಿಯಲ್ಲ.

**ವಾಟೀ ಸವಾಲುಃ ಆರೋಪಿತರ ಪರ ವಕೀಲರು ವಾಟೀ ಸವಾಲು ಇಲ್ಲ ಎಂದು ನುಡಿದಿರುತ್ತಾರೆ.**

**ಮರು ವಿಚಾರಣೆಃ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓದಿ ಹೇಳಿ ಕೇಳಿ ಸರಿ ಇದೆ

**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು**
**ಪ್ರ. ದ. ನ್ಯಾ . ದಂ. ಕುಂದಾಪುರ**